## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 731 |
| ಮಾನ್ಯ ಸದಸ್ಯರ ಹೆಸರು | ಡಾ. ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 19.09.2022 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಅಕ್ರಮವಾಗಿ ವಿದ್ಯಾರ್ಥಿಗಳಲ್ಲದೆ ಕೆಲವರು ವಸತಿ ನಿಲಯದಲ್ಲಿ ವಾಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು; | ಗುಲ್ಬರ್ಗಾ ವಿಶ್ವವಿದ್ಯಾಲಯದಲ್ಲಿರುವ ವಿದ್ಯಾರ್ಥಿಗಳ ವಸತಿ ನಿಲಯಗಳಲ್ಲಿ ಪಿ.ಹೆಚ್‌ಡಿ ಮುಗಿದು ಎರಡು ವರ್ಷಗಳಾದರೂ ಇಲ್ಲಿಯವರೆಗೆ ವಿದ್ಯಾರ್ಥಿಗಳು ವಸತಿ ನಿಲಯವನ್ನು ಖಾಲಿ ಮಾಡದಿರುವ ಪ್ರಕರಣಗಳು ಕಂಡುಬಂದಿರುವುದಿಲ್ಲ. ಆದರೆ, ಪ್ರಜಾವಾಣಿ ಕನ್ನಡ ದಿನಪತ್ರಿಕೆಯಲ್ಲಿ ಪಿ.ಹೆಚ್‌ಡಿ ಮುಗಿಸಿದವರೂ ವಾಸಿಸುತ್ತಿದ್ದಾರೆಂಬ ವರದಿಯ ಮೇರೆಗೆ ಗುಲ್ಬರ್ಗಾ ವಿಶ್ವವಿದ್ಯಾಲಯವು ಪರಿಶೀಲನೆ ಮತ್ತು ತನಿಖೆ ಕಾರ್ಯ ಕೈಗೊಂಡಿದ್ದು, ಅರ್ಹರಿಗೆ ಅವಕಾಶ ದೊರಕಿಸಲು ಹಾಗೂ ಅರ್ಹರಲ್ಲದವರನ್ನು ವಸತಿನಿಲಯದಿಂದ ಹೊರ ಕಳುಹಿಸಲು ಅನುವಾಗುವಂತೆ ಅರ್ಹ ಸಂಶೋಧನಾ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯದಿಂದ ಗುರುತಿನ ಚೀಟಿ ನೀಡಲಾಗುತ್ತಿದೆ. |
| (ಆ) | ಪಿ.ಹೆಚ್.ಡಿ. ಮುಗಿದು ಎರಡು ವರ್ಷವಾದರೂ ಇಲ್ಲಿಯವರೆಗೆ ವಿದ್ಯಾರ್ಥಿಗಳು ವಸತಿ ನಿಲಯವನ್ನು ಖಾಲಿ ಮಾಡದಿರುವುದಕ್ಕೆ ಕಾರಣವೇನು; | |
| (ಇ) | ವಸತಿ ನಿಲಯ ಖಾಲಿ ಮಾಡದಿರುವುದರಿಂದ, ಹೊಸದಾಗಿ ಬಂದ ವಿದ್ಯಾರ್ಥಿಗಳಿಗೆ ವಸತಿ ನಿಲಯದಲ್ಲಿ ಪ್ರವೇಶ ದೊರೆಯದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; | |

ಸಂಖ್ಯೆ: ಇಡಿ 93 ಯುಜಿವಿ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ್, ಐಟಿ ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು